**All India Radio: Bangalore**
**National Bulletin In Kannada**
**05.10.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**05.10.2026 07.35 a.m.**
**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ-ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪಾರ್ಮೆಲಿನ್ ದ್ವಿಪಕ್ಷೀಯ ಚರ್ಚೆ
2. ಒಟ್ಟಾವಾದಲ್ಲಿ ಇಂದಿನಿಂದ ಪ್ರಸ್ತಾವಿತ ಭಾರತ-ಕೆನಡಾ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ ಕುರಿತು ಐದನೇ ಸುತ್ತಿನ ಮಾತುಕತೆ
3. ಷರತ್ತುಗಳನ್ನು ಅಮೆರಿಕ ಪೂರೈಸುವವರೆಗೆ ಹಾರ್ಮುಜ್ ಜಲಸಂಧಿ ತೆರೆಯುವುದಿಲ್ಲ - ಇರಾನ್ ಘೋಷಣೆ
4. ಕತಾರ್‌ನ ದೋಹಾದಲ್ಲಿ ೨೦೩೦ರ ಏಷ್ಯನ್ ಕ್ರೀಡಾಕೂಟ

<><><><>

ನವದೆಹಲಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪಾರ್ಮೆಲಿನ್ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಹಿರಿಯ ಅಧಿಕಾರಿಗಳು ಮತ್ತು ಉದ್ಯಮ ವಲಯದ ಪ್ರಮುಖರನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗದೊಂದಿಗೆ ಪಾರ್ಮೆಲಿನ್ ಅವರು ಭಾರತಕ್ಕೆ ಮೂರು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಪಾರ್ಮೆಲಿನ್ ಅವರು ವ್ಯಾಪಾರ ಮತ್ತು ಹೂಡಿಕೆ, ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ, ಚಲನಶೀಲತೆ, ಸಂಸ್ಕೃತಿ ಹಾಗೂ ಜನರ ನಡುವಿನ ಸಂಪರ್ಕ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿನ ದ್ವಿಪಕ್ಷೀಯ ಸಹಕಾರದ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ. ಸಹಕಾರ ಸೇರಿದಂತೆ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪಾರ್ಮೆಲಿನ್ ಅವರು ಇಂದು ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಲಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಕೂಡ ಪಾರ್ಮೆಲಿನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ.

<><><><>

ಭಾರತ ಮತ್ತು ಕೆನಡಾ ತಮ್ಮ ಪ್ರಸ್ತಾವಿತ 'ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ' ಕುರಿತಾದ ಮಾತುಕತೆಯ ಐದನೇ ಸುತ್ತನ್ನು ಇಂದು ಒಟ್ಟಾವಾದಲ್ಲಿ ಆರಂಭಿಸಲಿವೆ. ೨೦೨೬ರ ಅಂತ್ಯದ ವೇಳೆಗೆ ಈ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವುದು ಉಭಯ ದೇಶಗಳ ಗುರಿಯಾಗಿದೆ. ಐದು ದಿನಗಳ ಕಾಲ ನಡೆಯಲಿರುವ ಈ ಮಾತುಕತೆಗಳು, ಈ ತಿಂಗಳ ೯ರವರೆಗೆ ಮುಂದುವರಿಯಲಿವೆ. ಈ ಹಿಂದಿನ ಮಾತುಕತೆಗಳು ಕಳೆದ ತಿಂಗಳ ೧೮ರಂದು ನವದೆಹಲಿಯಲ್ಲಿ ಮುಕ್ತಾಯಗೊಂಡಿತ್ತು. ಈಗ ಅಧಿಕಾರಿಗಳು ಅಂತಿಮ ಒಪ್ಪಂದದತ್ತ ತ್ವರಿತ ಪ್ರಗತಿಯನ್ನು ಸಾಧಿಸಲು ಪ್ರಯತ್ನಿಸುತ್ತಿದ್ದಾರೆ. ಈ ವರ್ಷದ ಮಾರ್ಚ್‌ನಲ್ಲಿ ನವದೆಹಲಿಯಲ್ಲಿ ನಡೆದ ಸಭೆಯಲ್ಲಿ,

ಪ್ರಧಾನಿ ನರೇಂದ್ರ ಮೋದಿ ಮತ್ತು ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಅವರು ಉಭಯ ದೇಶಗಳ ನಡುವಿನ ಸಿಇಪಿಎ ಮಾತುಕತೆಗಳನ್ನು ಪೂರ್ಣಗೊಳಿಸಲು ವರ್ಷಾಂತ್ಯದ ಗಡುವನ್ನು ನಿಗದಿಪಡಿಸಿದರು. ಅಲ್ಲದೆ, ಇಂಧನ ಮತ್ತು ಪ್ರಮುಖ ಖನಿಜ ವಲಯಗಳಲ್ಲಿ ದ್ವಿಪಕ್ಷೀಯ ಸಹಕಾರ ಬಲಪಡಿಸಲು ಒಪ್ಪಿಕೊಂಡರು. ೨೦೩೦ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು ೪.೭೫ ಲಕ್ಷ ಕೋಟಿ ರೂಪಾಯಿಗಳಿಗೆ ವಿಸ್ತರಿಸುವ ಹಂಚಿಕೆಯ ಆಶಯಕ್ಕೆ ಸಿಇಪಿಎ ಬೆಂಬಲ ನೀಡುತ್ತದೆ ೨೦೨೪-೨೫ರಲ್ಲಿ ಭಾರತ ಮತ್ತು ಕೆನಡಾ ನಡುವಿನ ಸರಕುಗಳ ದ್ವಿಪಕ್ಷೀಯ ವ್ಯಾಪಾರ ೮.೬೬ ಶತಕೋಟಿ ಅಮೆರಿಕನ್ ಡಾಲರ್‌ಗಳಷ್ಟಿತ್ತು, ಇದರಲ್ಲಿ ಭಾರತದಿಂದ ರಫ್ತು ೪.೨೨ ಶತಕೋಟಿ ಅಮೆರಿಕನ್ ಡಾಲರ್ ತಲುಪಿತ್ತು.

<><><><>

ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವಾಲಯ ಗುಜರಾತ್‌ನಲ್ಲಿ ಇಂದಿನಿಂದ ಎರಡು ದಿನಗಳ ಚಿಂತನ ಶಿಬಿರ ಏರ್ಪಡಿಸಿದೆ. ದೇಶದ ಹೆದ್ದಾರಿ ಮೂಲಸೌಕರ್ಯ ಹಾಗೂ ಅಭಿವೃದ್ಧಿಗೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಮತ್ತು ಅನುಷ್ಠಾನ ಸಂಸ್ಥೆಗಳ ಹಿರಿಯ ಪ್ರತಿನಿಧಿಗಳು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಸಮಾವೇಶದಲ್ಲಿ ಕಾರ್ಯಾನುಷ್ಠಾನದಲ್ಲಿ ಎದುರಾಗುವ ಸವಾಲುಗಳು, ನಾವೀನ್ಯತಾ ಮತ್ತು ಪ್ರತಿಫಲಿಸಬಹುದಾದ ಉಪಕ್ರಮಗಳ ಬಗ್ಗೆ ಚರ್ಚಿಸಲಾಗುತ್ತದೆ. ಯೋಜನೆಗಳ ಗುಣಮಟ್ಟ ಸುರಕ್ಷತೆ ಮತ್ತು ದಕ್ಷ ಅನುಷ್ಠಾನದ ಬಗ್ಗೆಯು ಚಿಂತನ ಶಿಬಿರದಲ್ಲಿ ಸಮಾಲೋಚಿಸಲಾಗುತ್ತದೆ. ಕೇಂದ್ರ ರಸ್ತೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಹಾಗೂ ರಾಜ್ಯ ಸಚಿವರಾದ ಅಜಯ್ ತಮಟ ಮತ್ತು ಹರ್ಷ ಮಲ್ಹೋತ್ರಾ ಪಾಲ್ಗೊಳ್ಳಲಿದ್ದಾರೆ.

<><><><>

ನವದೆಹಲಿಯಲ್ಲಿ ಇಂದು ೧೭ನೇ ಪಿಂಚಣಿ ಅದಾಲತ್ ನಡೆಯಲಿದೆ. ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದು-ಕೊರತೆ ಮತ್ತು ಪಿಂಚಣಿ ಖಾತೆ ಸಚಿವ ಡಾಕ್ಟರ್ ಜಿತೇಂದ್ರ ಸಿಂಗ್ ಅಧ್ಯಕ್ಷತೆ ವಹಿಸಲಿದ್ದಾರೆ. ಹಿರಿಯ ಪಿಂಚಣಿದಾರರು ಮತ್ತು ಕುಟುಂಬ ಪಿಂಚಣಿದಾರರ ದೀರ್ಘಕಾಲದ ೨೯೭ ಪ್ರಕರಣಗಳನ್ನು ಪರಿಹಾರಕ್ಕಾಗಿ ಪರಿಗಣಿಸಲಾಗುವುದು ಎಂದು ಪಿಂಚಣಿ ಸಚಿವಾಲಯ ತಿಳಿಸಿದೆ. ಈ ವರ್ಷದ ಮೇ ೧೩ ರಂದು ನಡೆದ ೧೬ನೇ ಪಿಂಚಣಿ ಅದಾಲತಿನ  ಸಾಧನೆಗಳನ್ನು ದಾಖಲಿಸುವ ಕರಪತ್ರಗಳನ್ನು ಸಚಿವರು ಈ ಸಂದರ್ಭದಲ್ಲಿ ಬಿಡುಗಡೆ ಮಾಡಲಿದ್ದಾರೆ. ಇದಲ್ಲದೆ ಕುಟುಂಬ ಪಿಂಚಣಿದಾರರಿಗೆ ಸಂಬಂಧಿಸಿದ ವಿಷಯಗಳ ಕುರಿತ ಅನೇಕ ಪ್ರಶ್ನೆಗಳಿಗೆ ಉತ್ತರ ಒದಗಿಸುವ ಕಿರು ಹೊತ್ತಿಗೆಯನ್ನು ಕೂಡ ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಲಾಗುತ್ತದೆ. ೨೦೧೭ರಲ್ಲಿ ಆರಂಭಿಸಲಾದ ಪಿಂಚಣಿ ಅದಾಲತ್ ಮೂಲಕ ಇದುವರೆಗೆ ೨೦ ಸಾವಿರ ೬೭೬ ಕುಂದು-ಕೊರತೆ ಪ್ರಕರಣಗಳನ್ನು ಸ್ಥಳದಲ್ಲೇ ಪರಿಹರಿಸಲಾಗಿದೆ. ಶೇಕಡ ೭೧.೭೯ರಷ್ಟು ಯಶಸ್ಸಿನ ದರವನ್ನು ಕಾಯ್ದುಕೊಳ್ಳಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, 'ಜನ ಸೇವೆಯೇ ದೇಶ ಸೇವೆ' ಎಂಬ ಅಭಿಯಾನ ನಡೆಯುತ್ತಿದೆ. ಸುಶಾಸನದ

ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಭಯೋತ್ಪಾದನೆಯ ವಿರುದ್ಧ ದಿಟ್ಟ ಹೆಜ್ಜೆ  ಕುರಿತ ಒಂದು ವರದಿ ಇಲ್ಲಿದೆ. ೨೬/೧೧ ರ ದಾಳಿಯಲ್ಲಿ ಪಾಕಿಸ್ತಾನದ ಬಂದೂಕುಧಾರಿಗಳು, ಮುಂಬೈಯನ್ನು ನಾಲ್ಕು ದಿನಗಳ ಕಾಲ ವಶಪಡಿಸಿಕೊಂಡಾಗ, ಭಾರತದ ಉತ್ತರ ಕಾಗದಪತ್ರಗಳಾಗಿತ್ತು. ದಾಖಲೆಗಳು ಗಡಿಯನ್ನು ದಾಟಿ ಹೋದವು. ಆದರೆ ಯಾವುದೇ ಕಠಿಣ ಕ್ರಮ ಕೈಗೊಳ್ಳಲಿಲ್ಲ. ದಾಳಿಗಳು ನಡೆಯುತ್ತಲೇ ಇದ್ದವು. ಕ್ಷಮೆಯಾಚಿಸುವ ಪದ್ಧತಿ ೨೦೧೬ರ ಸೆಪ್ಟೆಂಬರ್‌ನಲ್ಲಿ ಕೊನೆಗೊಂಡಿತು. ಭಾರತೀಯ ಪಡೆಗಳು ಗಡಿ ನಿಯಂತ್ರಣ ರೇಖೆಯನ್ನು ದಾಟಿ, ಭಯೋತ್ಪಾದಕ ನೆಲೆಗಳನ್ನು ಹೊಡೆದುರುಳಿಸಿದವು. ೨೦೧೯ರ ಫೆಬ್ರವರಿಯಲ್ಲಿ ಮಿರಾಜ್ ಯುದ್ಧ ವಿಮಾನಗಳು ಪಾಕಿಸ್ತಾನದೊಳಗಿನ ಬಾಲಾಕೋಟ್ ಭಯೋತ್ಪಾದಕ ಶಿಬಿರದ ಮೇಲೆ ದಾಳಿ ಮಾಡಿದವು. ಇದು ೧೯೭೧ ರ ನಂತರ ಅಂತಾರಾಷ್ಟ್ರೀಯ ಗಡಿಯಲ್ಲಿ ಭಾರತ ನಡೆಸಿದ ವಾಯುದಾಳಿಯಾಗಿದೆ. ೨೦೨೫ರ ಮೇ ನಲ್ಲಿ ಆಪರೇಷನ್ ಸಿಂಧೂರ ಮೂಲಕ ಒಂದೇ ರಾತ್ರಿಯಲ್ಲಿ ಒಂಬತ್ತು ಭಯೋತ್ಪಾದಕ ನೆಲೆಗಳನ್ನು ಹೊಡೆದುರುಳಿಸಿತು. ಭಾರತದ ಸಿದ್ಧಾಂತ ಈಗ ಸ್ಪಷ್ಟವಾಗಿದೆ. ಭಯೋತ್ಪಾದಕ ದಾಳಿಗೆ ಮಿಲಿಟರಿ ಉತ್ತರ ಸಿಗುತ್ತದೆ. ಭಯೋತ್ಪಾದಕರು ಮತ್ತು ಅವರಿಗೆ ಆಶ್ರಯ ನೀಡುವ ದೇಶದ ನಡುವೆ ಯಾವುದೇ ವ್ಯತ್ಯಾಸ ಇಲ್ಲ.

<><><><>

ಸಂಘರ್ಷ ಕೊನೆಗೊಳಿಸುವ ಪ್ರಯತ್ನಗಳ ಕುರಿತು ಇರಾನ್ ಮತ್ತು ಅಮೆರಿಕ ನಡುವೆ ಭಿನ್ನಾಭಿಪ್ರಾಯಗಳು ಮುಂದುವರಿದಿರುವ ಹಿನ್ನೆಲೆಯಲ್ಲಿ, ಜೂನ್ ತಿಂಗಳ ಮಧ್ಯಂತರ ಒಪ್ಪಂದದಲ್ಲಿ ವಿವರಿಸಲಾದ ಏಳು ಷರತ್ತುಗಳನ್ನು ಅಮೆರಿಕ ಪೂರೈಸುವವರೆಗೆ ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವುದಿಲ್ಲ ಎಂದು ಇರಾನ್ ಘೋಷಿಸಿದೆ. ಈ ಕಾರ್ಯತಂತ್ರದ ಜಲಮಾರ್ಗವನ್ನು ಮತ್ತೆ ತೆರೆಯುವ ವಿಷಯದಲ್ಲಿ ಇರಾನ್ ನಿಲುವು ಸ್ಪಷ್ಟ ಮತ್ತು ದೃಢವಾಗಿದೆ. ಏಳು ಷರತ್ತುಗಳು ಈಡೇರುವವರೆಗೆ ಹಾರ್ಮುಜ್ ಜಲಸಂಧಿಯನ್ನು ತೆರೆಯಲಾಗುವುದಿಲ್ಲ ಎಂದು ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಕರ್ ಖಲಿಬಾಫ್ ತಿಳಿಸಿದ್ದಾರೆ. ಸುದ್ದಿಸಂಸ್ಥೆಯೊಂದಿಗೆ ಮಾತನಾಡಿದ ಇರಾನ್ ಸೇನೆಯ ವಕ್ತಾರ ಮೊಹಮ್ಮದ್ ಅಕ್ರಮೀನಿಯಾ, ಅಮೆರಿಕದೊಂದಿಗಿನ ಇತ್ತೀಚಿನ ಸಂಘರ್ಷದ ನಂತರ ಇರಾನ್ ತನ್ನ ಕ್ಷಿಪಣಿಗಳ ವ್ಯಾಪ್ತಿಯನ್ನು ವಿಸ್ತರಿಸಲು ಪ್ರಯತ್ನಿಸಲಿದೆ ಎಂದು ಹೇಳಿದ್ದಾರೆ. ಈ ಸಂಘರ್ಷವು ದೀರ್ಘ-ವ್ಯಾಪ್ತಿಯ ಕ್ಷಿಪಣಿಗಳನ್ನು ಅಭಿವೃದ್ಧಿಪಡಿಸುವ ಅಗತ್ಯವನ್ನು ಎತ್ತಿ ತೋರಿಸಿದೆ ಮತ್ತು ಇರಾನ್ ಈಗಾಗಲೇ ಆ ನಿಟ್ಟಿನಲ್ಲಿ ಕ್ರಮಗಳನ್ನು ಕೈಗೊಳ್ಳಲು ಪ್ರಾರಂಭಿಸಿದೆ ಎಂದು ಅವರು ತಿಳಿಸಿದ್ದಾರೆ. ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘಾಯಿ ಮಾತನಾಡಿ, ಇರಾನ್ ಪ್ರಸ್ತುತ ಹಾರ್ಮುಜ್ ಜಲಸಂಧಿಯ ವಿಷಯದ ಮೇಲೆ ಗಮನಹರಿಸಿದೆ. ಕಾರ್ಯತಂತ್ರದ ದೃಷ್ಟಿಯಿಂದ ಪ್ರಮುಖವಾದ ಈ ಜಲಮಾರ್ಗದಲ್ಲಿ ಭದ್ರತೆಯನ್ನು ಮರುಸ್ಥಾಪಿಸಲು ಅಮೆರಿಕದಿಂದ ಸ್ಪಷ್ಟ ಹಾಗೂ ದೃಢವಾದ ಕ್ರಮಗಳ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ಜೂನ್ ತಿಂಗಳ ತಿಳಿವಳಿಕೆ ಒಪ್ಪಂದವು ಎರಡೂ ದೇಶಗಳ ನಡುವೆ ಅಲ್ಪಕಾಲದ ಕದನ

ವಿರಾಮಕ್ಕೆ ದಾರಿ ಮಾಡಿಕೊಟ್ಟಿತ್ತು. ಈ ಒಪ್ಪಂದವು ಹಾರ್ಮುಜ್ ಜಲಸಂಧಿ ಹಾಗೂ ಇರಾನ್‌ನ ಪರಮಾಣು ಕಾರ್ಯಕ್ರಮಕ್ಕೆ ಸಂಬಂಧಿಸಿದ ಅಂಶಗಳನ್ನು ಒಳಗೊಂಡಿತ್ತು.

<><><><>

೨೦೨೬ರ ಏಷ್ಯನ್ ಗೇಮ್ಸ್‌ಗೆ ನಿನ್ನೆ ಅದ್ದೂರಿಯಾಗಿ ತೆರೆಬಿದ್ದಿದೆ. ಮುಂದಿನ ೨೦೩೦ರ ಏಷ್ಯನ್ ಕ್ರೀಡಾಕೂಟ ದೋಹಾದಲ್ಲಿ ನಡೆಯಲಿದೆ. ಜಪಾನಿನ ನಗೋಯಾದ ಮಿಜುಹೊ ಪಾರ್ಕ್ ಅಥ್ಲೆಟಿಕ್ ಕ್ರೀಡಾಂಗಣದಲ್ಲಿ ನಡೆದ ಸಮಾರೋಪ ಸಮಾರಂಭದಲ್ಲಿ ಒಲಂಪಿಕ್ ಕೌನ್ಸಿಲ್ ಆಫ್ ಏಷ್ಯದ ಅಧ್ಯಕ್ಷರು, ಕತಾರ್ ಪ್ರತಿನಿಧಿಗಳಿಗೆ ಸಮಾರಂಭದಲ್ಲಿ ಜ್ಯೋತಿ ಮತ್ತು ಧ್ವಜವನ್ನು ಹಸ್ತಾಂತರಿಸಿದರು. ಕ್ರೀಡಾಕೂಟದಲ್ಲಿ ಎರಡು ಚಿನ್ನ ಹಾಗೂ ಒಂದು ರಜತ ಪದಕ ಗಳಿಸಿದ ಭಾರತೀಯ ಶೂಟರ್ ನೀರೂ ದಾಂಡ ಸಮಾರೋಪ ಸಮಾರಂಭದಲ್ಲಿ ಭಾರತದ ಧ್ವಜವನ್ನು ಹಿಡಿದು ಸಾಗಿದರು.  ಈ ಕ್ರೀಡಾಕೂಟದಲ್ಲಿ ಭಾರತ ೨೧ ಚಿನ್ನ, ೨೭ ಬೆಳ್ಳಿ ಹಾಗೂ ೩೭ ಕಂಚು ಸೇರಿದಂತೆ ಒಟ್ಟು ೮೫ ಪದಕಗಳನ್ನು ಗಳಿಸಿ ನಾಲ್ಕನೇ ಸ್ಥಾನ ಪಡೆದಿದೆ. ಏಷ್ಯನ್ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡಿದ ಭಾರತೀಯ ಕ್ರೀಡಾಪಟುಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಅಭಿನಂದಿಸಿದ್ದಾರೆ.

<><><><>

ಈಜಿಪ್ಟ್‌ನ ಕೈರೋದಲ್ಲಿ ನಡೆಯಲಿರುವ ಬಿಡಬ್ಲ್ಯೂಎಫ್ ವಿಶ್ವ ಜೂನಿಯರ್ ಮಿಶ್ರ ತಂಡಗಳ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತೀಯ ಬ್ಯಾಡ್ಮಿಂಟನ್ ತಂಡ ಇಂದು ತನ್ನ ಅಭಿಯಾನ ಆರಂಭಿಸಲಿದೆ. ಭಾರತೀಯ ತಂಡದ ನೇತೃತ್ವವನ್ನು ತನ್ವಿ ಪತ್ರಿ ವಹಿಸಿದ್ದಾರೆ. ಇವರು ಇತ್ತೀಚೆಗೆ ಬ್ಯಾಡ್ಮಿಂಟನ್ ಏಷ್ಯಾ ಜೂನಿಯರ್ ಚಾಂಪಿಯನ್‌ಶಿಪ್‌ನಲ್ಲಿ ೧೭ ವರ್ಷದೊಳಗಿನವರ ಬಾಲಕಿಯರ ಸಿಂಗಲ್ಸ್ ಪ್ರಶಸ್ತಿ ಗೆದ್ದಿದ್ದರು. ಭಾರತ, ಪೆರು ಮತ್ತು ಅಲ್ಜೀರಿಯಾ ಜೊತೆಗೆ 'ಡಿ೧' ಗುಂಪಿನಲ್ಲಿ ಸ್ಥಾನ ಪಡೆದಿದೆ. ಭಾರತೀಯ ತಂಡ ನಾಳೆ ಅಲ್ಜೀರಿಯಾವನ್ನು ಮತ್ತು ಮಂಗಳವಾರ ಪೆರು ತಂಡವನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>